# JAIN COLLEGE

463/465, 18th Main Road, SS Royal, 80 Feet Road
Rajarajeshwari Nagar, Bangalore - 560 098

***SUBJECT: KANNADA***

***II PUC***
***MOCK - II***

***Timings Allowed: 3 Hrs 15 Minutes*** ***Total Marks: 100***

**ಸೂಚನೆಗಳು**

- **ಒಂದು ವಾಕ್ಯದ ಎಲ್ಲಾ ಪ್ರಶ್ನೆಗಳಿಗೂ ಕಡ್ಡಾಯವಾಗಿ ಉತ್ತರಿಸಿ.**
- **ಪ್ರತಿಯೊಂದು ವಿಭಾಗದಲ್ಲಿ ನೀಡಲಾಗಿರುವ ಆಯ್ಕೆಗಳಿಗೆ ಅನುಗುಣವಾಗಿ ಉತ್ತರಿಸಿ.**
- **ಹೆಚ್ಚುವರಿ ಪ್ರಶ್ನೋತ್ತರಗಳನ್ನು ಬರೆಯದಂತೆ ಗಮನವಹಿಸಿ**
- **ಪ್ರಶ್ನೆಗಳ ಸಂಖ್ಯೆಯನ್ನು ಸರಿಯಾದ ರೀತಿಯಲ್ಲಿ ತಪ್ಪದೆ ಬರೆಯಿರಿ.**

**I ಒಂದು ವಾಕ್ಯದಲ್ಲಿ ಉತ್ತರಿಸಿ.** **10X1=10**

1. ನಿಷ್ಪ್ರಯೋಜಕನಾದ ಮಗ ಯಾರೆಂದು ಸೋಮನಾಥ ಹೇಳಿದ್ದಾನೆ?
2. ಬ್ಯಾಸಗಿ ದಿವಸಕ್ಕೆ ಯಾವ ಮರ ತಂಪು?
3. ಕುಳಿತು ಕೆಮ್ಮುವ ಪ್ರಾಣಿ ಯಾರು?
4. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?
5. ಭೂಮಿಯ ಮೇಲಿನ ಮೊದಲ ವಿಜ್ಞಾನಿ ಯಾರು?
6. ಕನ್ನಡದ ಮೂಲಕ ಕಲಿತು ಶ್ರೇಷ್ಠ ವಿಜ್ಞಾನಿಯಾದವರು ಯಾರು?
7. ಲೇಖಕಿಯ ಪತಿ ಯಾವ ತೊಂದರೆಯಿಂದ ಬಳಲಿದರು?
8. ನಿರೂಪಕರ ಕೊಡಲಿಯ ಆಕಾರ ಹೇಗಿತ್ತು?
9. ಆನೆ ಯಾರ ಅಂಗಡಿಯನ್ನು ದೂಡಿ ಬೀಳಿಸಿತು?
10. ಆನೆಶಾಸ್ತ್ರದವನು ಏನೆಂದು ಭವಿಷ್ಯ ನುಡಿದಿದ್ದನು?

**II ಅ. ನಾಲ್ಕು ಪ್ರಶ್ನೆಗಳಿಗೆ <u>ಎರಡು</u> ಮೂರು ವಾಕ್ಯದಲ್ಲಿ ಉತ್ತರಿಸಿ.** ***4X2=8***

11. ಯಾವ ಗುಣಗಳಿಲ್ಲದವನು ಡಾಂಭಿಕನೆನಿಸುತ್ತಾನೆ?
12. ಮಲಗಿರುವ ಭೀಮನನ್ನು ದ್ರೌಪದಿ ಹೇಗೆ ಎಬ್ಬಿಸಿದಳು?
13. ಮೊಮ್ಮಗಳ ಆತುರಕ್ಕೆ ಮುದುಕಿ ಏನೆಂದುಕೊಂಡಳು.
14. ತಂದೆ ಮಗುವಿಗೆ ಕಾಣಿಸಿಕೊಳ್ಳುವ ಬಗೆ ಹೇಗೆ?
15. ಕವಯಿತ್ರಿ ನಗುವ ನಗು ಎಂತಹದು?

**ಆ. ಕೆಳಗಿನ ಪ್ರಶ್ನೆಗಳಲ್ಲಿ <u>ಮೂರಕ್ಕೆ</u> ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ.** **3X2=6**

16. ಲೇಖಕರಲ್ಲಿ ಕನ್ನಡ ಪ್ರೀತಿ ಸ್ಫುರಿಸಿದ್ದು ಹೇಗೆ?
17. ಮಾದೇಗೌಡರು ಪಥ್ಯದ ವಿಚಾರವಾಗಿ ಹೊಂದಿದ್ದ ನಿಲುವು ಯಾವುದು?
18. ಕಲಾಂ ಅವರು ಬಂಡೆಗಳ ಬಸಿರಲ್ಲಿ ಕಂಡದ್ದೇನು?
19. ಸಂಸ್ಕೃತ ಕನ್ನಡಗಳು ಸೇರಿದರೆ ಹೇಗೆ ಸೊಗಯಿಸುತ್ತದೆ?

**ಇ. ಕೆಳಗಿನ ಪ್ರಶ್ನೆಗಳಲ್ಲಿ <u>ಮೂರಕ್ಕೆ</u> ಮಾತ್ರ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ.** **3X2=6**

20. ಆನೆ ಸಾಕುವುದುರ ಬಗ್ಗೆ ಜನರ ನಂಬಿಕೆ ಏನಾಗಿತ್ತು?
21. ಆನೆ ಮರ ತಳ್ಳುವ ಬಗೆಯನ್ನು ಲೇಖಕರು ಹೇಗೆ ನಿರೂಪಿಸಿದ್ದಾರೆ?
22. ಲೇಖಕರು ಕ್ಯಾಲಿಕ್ಯುಲೇಟರ್‌ನಲ್ಲಿ ಲೆಕ್ಕಹಾಕಿ ಜಬ್ಬಾರ್‌ಗೆ ಏನೆಂದು ಹೇಳಿದರು?
23. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹಿರಾತು ನೀಡಿದರು?

**III ಅ. ಕೆಳಗಿನ ಯಾವುದಾದರು ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 2X3=6**

24. ಉದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ.
25. ಹಾನಿ ಹರಿಬಕೆ ನಿಲ್ಲದಂಗೈಸುವನು.
26. ಮರಣ ಬಂದೀತು ಕ್ಷಣವು ಉರುಳಿ.

**ಆ. ಕೆಳಗಿನ ಯಾವುದಾದರೂ <u>ಒಂದು</u> ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3**

27. ದುರಂತದ ಮೂಲ ಬೀಜ ಚಹಾ ಗಿಡದ ರೂಪದಲ್ಲಿ ಬಂದವು.
28. ಬೆಳ್ಳಿಲೋಟಕ್ಕೆ ಇದೀಗ ಕುದುಪನಿಂದಾಗಿ ಜೀವ ಬಂದಂತಾಯ್ತು.

**ಇ. ಕೆಳಗಿನ ಯಾವುದಾದರು <u>ಒಂದು</u> ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3**

29. ಆನೆಗೂ ಮಾನ ಮರ್ಯಾದೆ ಇರುತ್ತೆ ತಿಳಕೊ.
30. ಕೃಷ್ಣೇಗೌಡರ ಆನೆಗೂ ನಾಯಿ ಕಚ್ಚಿದೆ ಅಂತ ವರ್ತಮಾನ ಉಂಟಪ್ಪ.

**IV ಅ. ಕೆಳಗಿನ ಯಾವುದಾದರು <u>ಮೂರು</u> ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 3X4=12**

31. ರಕ್ಷಿಸಬೇಕಾದವರೆ ಭಕ್ಷಕರಾದರೆ ಒದಗುವ ವಿಘಟನೆಯನ್ನು ಬಸವಣ್ಣನವರು ಹೇಗೆ ಚಿತ್ರಿಸಿದ್ದಾರೆ?
32. ದ್ರೌಪದಿ ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿ.
33. ಜನಪದರು ಹೇಳುವಂತೆ ನಮ್ಮ ನೆರೆಹೊರೆ ಹೇಗಿರಬೇಕು? ವಿವರಿಸಿ.
34. ಶಿಲುಬೆಗೇರಿದ ಜೀಸಸ್‌ನ ದೇಹ ಏನನ್ನು ಹೇಳುವಂತಿದೆ?ವಿವರಿಸಿ.

**ಆ. ಕೆಳಗಿನ ಯಾವುದಾದರು ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8**

35. ಅಂತರಾಷ್ಟ್ರೀಯ ವಿದ್ಯಮಾನಗಳಿಂದಾಗಿ ವಾಲ್‌ಪರೈಗೆ ಒದಗಿದ ಸಮಸ್ಯೆಗಳೇನು?
36. ಧಣಿ ಹಾಗೂ ಹೊಳೆಯ ನಡುವಿನ ಸಮರವನ್ನು ಚಿತ್ರಿಸಿ.
37. 'ಹಳ್ಳಿ ಚಹಾ ಫಳಾರದ ಅಂಗಡಿ ವಾರ್ತಾ ಇಲಾಖೆ ಇದ್ದಂತೆ' – ಹೇಗೆ? ವಿವರಿಸಿ.

**ಇ. ಕೆಳಗಿನ ಯಾವುದಾದರು <u>ಎರಡು</u> ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8**

38. ದುರ್ಗಪ್ಪ ನಿರೂಪಕರ ಬಳಿಗೆ ಬಂದ ಸಂದರ್ಭವನ್ನು ವಿವರಿಸಿ.
39. ಡ್ರೈವರನ ಸಾವಿನ ಸುದ್ಧಿಯನ್ನು ಶಿವೇಗೌಡ ಮತ್ತಿತರರು ಹೇಗೆ ಮುಚ್ಚಿಹಾಕಿದರು?
40. ವೇಲಾಯುಧನ ಹೆಂಡತಿಗೆ ಆನೆಯ ಬಗ್ಗೆ ವಸತಿ ಮಾತ್ಸರ್ಯ ಮೂಡಲು ಕಾರಣವೇನು?

**V ಅ. ಕೆಳಗಿನ ಯಾವುದಾದರು <u>ಒಂದು</u> ಪದ್ಯದ ಭಾವಾರ್ಥ ಬರೆಯಿರಿ. 1X5-5**

41.ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮೆನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯೆನೆನ್ನ ಕುಲದ ಪೆಂಪಟಿವಿನೆಗಂ

**ಅಥವಾ**

42.ಕೆಲವಂ ಬಲ್ಲವರಿಂದ ಕಲ್ತು ಕೆಲವಂ ಶಾಸ್ತ್ರಂಗಳಂ ಕೇಳುತಂ
ಕೆಲವಂ ಮಾಳ್ಪರಿಂದ ಕಂಡು ಕೆಲವಂ ಸುಜ್ಞಾನದಿಂ ನೋಡುತಂ
ಕೆಲವಂ ಸಜ್ಜನ ಸಂಘದಿಂದಲರಿಯಲ್ ಸರ್ವಜ್ಞನಪ್ಪಂ ನರಂ
ಪಲವು ಪಳ್ಳ ಸಮುದ್ರವೈ ಹರಹರಾ ಶ್ರೀ ಚೆನ್ನಸೋಮೇಶ್ವರಾ

**VI ಭಾಷಾಭ್ಯಾಸ**

**ಆ. ಕೆಳಗಿನ <u>ಆರು</u> ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 2X6=12**

43. ಪದಗಳ ಅರ್ಥ ಬರೆಯಿರಿ :ಸ್ವಾದ, ಪಂಕ
44. ಸಮಾನಾರ್ಥಗಳನ್ನು ಬರೆಯಿರಿ :ತಮ, ಮಾಹೆ
45. ಕಾಲಸೂಚಕಗಳನ್ನು ಬರೆಯಿರಿ :ಬಂದರು, ಹೋಗುವಳು
46. ದ್ವಿರುಕ್ತಿಗಳನ್ನು ವ್ಯಾಕ್ಯಗಳಲ್ಲಿ ಉಪಯೋಗಿಸಿ :ಬೇಗಬೇಗ, ಕುಣಿಕುಣಿದುಬಗೆ, ರಾಗ
47. ತದ್ಭವ ಬರೆಯಿರಿ :ಶ್ರೀ, ಆಯುಷ್ಯ
48. ಕಾಲಸೂಚಕಗಳನ್ನು ಬರೆಯಿರಿ :ಬಂದರು, ಹೋಗುವಳು
49. ನುಡಿಗಟ್ಟುಗಳನ್ನು ಸ್ವಂತ ವಾಕ್ಯದಲ್ಲಿ ಬರೆಯಿರಿ – ಮೊರೆಯಿಡು, ತಲೆಕೊಡವು.

**ಇ. ಈ ಕೆಳಗಿನ ಯಾವುದಾದರು ಒಂದನ್ನು ಕುರಿತು ಪ್ರಬಂದ ಬರೆಯಿರಿ. 1X5=5**

50. ತಂತ್ರಜ್ಞಾನದಲ್ಲಿ ಕನ್ನಡ ಭಾಷೆಯ ಬಳಕೆ.
51. ತ್ಯಾಜ್ಯ ವಸ್ತುಗಳ ಮರುಬಳಕೆಯ ಅಗತ್ಯ

**ಈ. ಕೆಳಗಿನವುಗಳಲ್ಲಿ ಒಂದಕ್ಕೆ ಉತ್ತರಿಸಿ.** **1X4=4**

52. ಬ್ಯಾಂಕಿನಲ್ಲಿ ನಿಮ್ಮ ಉಳಿತಾಯ ಖಾತೆಯ ಅಕೌಂಟ್ ತರೆಯಲು ವ್ಯವಸ್ಥಾಪಕರಿಗೊಂದು ಪತ್ರ ರಚಿಸಿ.

**ಅಥವಾ**

53. ನಿಮ್ಮ ಭವಿಷ್ಯದ ಬಗೆಗಿನ ಕನಸನ್ನು ಸ್ನೇಹಿತರೊಂದಿಗೆ ಹಂಚಿಕೊಳ್ಳುವ ಬಗೆಗೆ ಪತ್ರ ಬರೆಯಿರಿ.

**ಉ. ಒಂದು ಗಾದೆಯನ್ನು ವಿಸ್ತರಿಸಿ ಬರೆಯಿರಿ.** **1X4=4**

54. ಕುಳಿತು ತಿನ್ನುವವರಿಗೆ ಕುಡಿಕೆ ಹೊನ್ನು ಸಾಲದು.

55. ಹಣಕ್ಕಿಂತ ಗುಣ ಮುಖ್ಯ.

********************************